## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 989 |
| ಸದಸ್ಯರ ಹೆಸರು | ಶ್ರೀ ಸಿ. ಎನ್ ಮಂಜೇಗೌಡ |
| ಉತ್ತರಿಸುವ ದಿನಾಂಕ | 20.08.2025 |
| ಉತ್ತರಿಸುವವರು | ಸಾರಿಗೆ ಮತ್ತು ಮುಜರಾಯಿ ಸಚಿವರು |

| ಪ್ರಶ್ನೆ | | ಉತ್ತರ |
|---|---|---|
| ಅ) | ರಾಜ್ಯದ ಮುಜರಾಯಿ ಇಲಾಖೆ ವ್ಯಾಪ್ತಿಯ ಯಾವ ಯಾವ ದೇವಸ್ಥಾನಗಳಲ್ಲಿ ಧಾರ್ಮಿಕ ಕ್ಷೇತ್ರದ ಘನತೆ ಗಾಂಭೀರ್ಯ ಮತ್ತು ಪಾವಿತ್ರ್ಯಕ್ಕೆ ಚ್ಯುತಿಯಾಗದಿರಲೆಂದು ವಸ್ತ್ರಸಂಹಿತೆಯನ್ನು ಜಾರಿಗೊಳಿಸಲಾಗಿದೆ; (ವಿವರಗಳನ್ನು ನೀಡುವುದು) | ಧಾರ್ಮಿಕ ದತ್ತಿ ಆಯುಕ್ತರ ಸುತ್ತೋಲೆ ಸಂಖ್ಯೆ:ಎಡಿಎಂ1/ಸಿಆರ್/14/15-16, ದಿನಾಂಕ: 20.09.2015ರಂತೆ ರಾಜ್ಯದ ಧಾರ್ಮಿಕ ದತ್ತಿ ಇಲಾಖೆಯ ಅಧೀನಕ್ಕೆ ಒಳಪಡುವ ಅಧಿಸೂಚಿತ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಸಮವಸ್ತ್ರವನ್ನು ನಿಗಧಿಪಡಿಸಿ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ.<br><br>ರಾಜ್ಯದ ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಅಧಿಸೂಚಿತ ದೇವಾಲಯಗಳಲ್ಲಿ ಸಾರ್ವಜನಿಕ ಭಕ್ತಾದಿಗಳಿಗೆ ವಸ್ತ್ರಸಂಹಿತೆಯನ್ನು ಜಾರಿಗೊಳಿಸಿರುವುದಿಲ್ಲ. ಆದರೆ, ಇಲಾಖೆಯ ಕೆಲವು ಪ್ರಮುಖ ದೇವಾಲಯಗಳಲ್ಲಿ (ಕೊಲ್ಲೂರು ಶ್ರೀ ಮೂಕಾಂಬಿಕೆ ದೇವಾಲಯ) ವಸ್ತ್ರಸಂಹಿತೆಯನ್ನು ಅಲ್ಲಿನ ರೂಢಿ ಮತ್ತು ಸಂಪ್ರದಾಯದಂತೆ ಪಾಲಿಸುವ ಕುರಿತಂತೆ ಸೂಚನಾ ಫಲಕಗಳನ್ನು ಆಯಾಯ ದೇವಾಲಯಗಳ ವ್ಯವಸ್ಥಾಪನಾ ಸಮಿತಿ/ದೇವಾಲಯದ ಆಡಳಿತ ವತಿಯಿಂದ ಅಳವಡಿಸಲಾಗಿರುತ್ತದೆ. |
| ಆ) | ಮೈಸೂರಿನ ಚಾಮುಂಡಿ ಬೆಟ್ಟದಲ್ಲಿರುವ ಚಾಮುಂಡೇಶ್ವರಿ ದೇವಾಲಯದಲ್ಲಿ ಈವರೆಗೂ ವಸ್ತ್ರಸಂಹಿತೆಯನ್ನು ಜಾರಿಗೊಳಿಸದಿರಲು ಕಾರಣಗಳೇನು; | ಮೈಸೂರು ಜಿಲ್ಲೆಯ ಮೈಸೂರು ತಾಲ್ಲೂಕಿನಲ್ಲಿರುವ ಶ್ರೀ ಚಾಮುಂಡೇಶ್ವರಿ ದೇವಸ್ಥಾನವನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ 78 ಮುಸೇವಿ 2023, ದಿನಾಂಕ:28.06.2024ರನ್ವಯ "ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ" ವನ್ನಾಗಿ ದಿನಾಂಕ:01.07.2024 ರಿಂದ ಜಾರಿಗೆ ಬರುವಂತೆ ರಚಿಸಿ ಆದೇಶಿಸಲಾಗಿರುತ್ತದೆ.<br><br>ಕಾರ್ಯದರ್ಶಿಗಳು, ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಇವರ ವರದಿಯನ್ವಯ "ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ"ದ ಪ್ರಥಮ ಸಭೆಯಲ್ಲಿ ವಿಷಯವನ್ನು ಮಂಡಿಸಲಾಗಿತ್ತು, ಸದರಿ ವಿಷಯವನ್ನು ಮುಂದಿನ ಸಭೆಯಲ್ಲಿ ಮಂಡಿಸಲು ತೀರ್ಮಾನಿಸಲಾಗಿರುತ್ತದೆ. ಅದರಂತೆ ಪ್ರಾಧಿಕಾರದ ಮುಂದಿನ ಸಭೆಯಲ್ಲಿ ಸದರಿ ವಿಷಯವನ್ನು ಮಂಡಿಸಲು ಕ್ರಮ ವಹಿಸಲಾಗುತ್ತದೆ. |
| ಇ) | ಈ ದೇವಸ್ಥಾನದಲ್ಲಿ ವಸ್ತ್ರ ಸಂಹಿತೆಯನ್ನು ಜಾರಿಗೊಳಿಸಬೇಕೆಂಬ ಬಗ್ಗೆ ಭಕ್ತರಿಂದ ಬೇಡಿಕೆ ಇದ್ದರೂ ಮೈಸೂರು ಜಿಲ್ಲೆ ಪ್ರವಾಸೋದ್ಯಮ ಜಿಲ್ಲೆ ಎಂಬ ನೆಪವೊಡ್ಡಿ ವಸ್ತ್ರಸಂಹಿತೆಯನ್ನು ಜಾರಿಗೊಳಿಸಲು ಮೀನಾ ಮೇಷ ಎಣಿಸುತ್ತಿರುವುದು ಸರಿಯಾದ ಕ್ರಮವೇ; | |
| ಈ) | ಧಾರ್ಮಿಕ ಕ್ಷೇತ್ರದ ಘನತೆ ಗಾಂಭೀರ್ಯವನ್ನು ಕಾಪಾಡುವ ಸಲುವಾಗಿ ಕೂಡಲೇ ವಸ್ತ್ರಸಂಹಿತೆಯನ್ನು ಜಾರಿಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? | |

ಸಂಖ್ಯೆ: ಕಂಇ 171 ಮುಸಪ್ರ 2025

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು